

ಅರುಣ ಪಿ. ಭಟ್ಟ

## ವಾರಭವಿಷ್ಯ: 11.04.2024ರಿಂದ 17.04.2024ರವರೆಗೆ




ಕುಟುಂಬದ ಬಗ್ಗೆ ಹೆಮ್ಮೆ ಪಡುವಂಥ ಬೆಳವಣಿಗೆ ಆಗುತ್ತದೆ. ವಾರದ ಶುರುವಿನಿಂದಲೇ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಆ ಕಾರಣಕ್ಕಾಗಿ ಹಲವು ಕೆಲಸ ಕಾರ್ಯಗಳನ್ನು ಪೂರೈಸಲಾಗುತ್ತದೆ. ಇದರಿಂದ ನಿಮಗೆ ಸಂತುಷ್ಟವಾಗುತ್ತದೆ. ಸಹೋದ್ಯೋಗಿಗಳ ಭಿನ್ನಾಭಿಪ್ರಾಯ ಮರೆಯಲು ಯತ್ನ. ಶುಭದಿನ 12. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಶುಭ ಕಾರ್ಯವನ್ನು ಆಯೋಜಿಸುವ ಸಾಧ್ಯತೆ ಇದೆ. ಈ ವಾರದ ಮೊದಲಾರ್ಧದಲ್ಲಿ ಗ್ರಹಗತಿಗಳು ನಿಮಗೆ ಅನುಕೂಲಕರವಾಗಿವೆ. ಈ ಅವಧಿಯಲ್ಲಿ ಅತಿ ಮುಖ್ಯವಾದ ಕೆಲಸಗಳನ್ನು ಮಾಡಿಕೊಳ್ಳಿ. ಉದ್ಯೋಗ ಸ್ಥಳದಲ್ಲಿ ನಿಮ್ಮ ವರ್ಚಸ್ಸು ಹೆಚ್ಚುವ ಸಾಧ್ಯತೆ ಇದೆ. ಅಧಿಕಾರಿಗಳು, ಸಹೋದ್ಯೋಗಿಗಳ ಜೊತೆಗೆ ನಿಮ್ಮ ಬಾಂಧವ್ಯ ಗಟ್ಟಿ ಆಗಲಿದೆ. ಶುಭದಿನ 16. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಆರೋಗ್ಯ ಸುಧಾರಿಸುವುದು. ಆಕಸ್ಮಿಕ ಖರ್ಚು ಸಂಭವ. ಆಸ್ತಿ ಖರೀದಿ ಬಗ್ಗೆ ಚಿಂತನೆ. ಕಲಾವಿದರಿಗೆ, ಸಾಹಿತಿಗಳಿಗೆ ಉತ್ತಮ ವಾರ. ರಾಜಕೀಯದ ಅವಕಾಶ. ಸಂಘ ಸಂಸ್ಥೆಗಳಿಂದ ಧನಲಾಭ. ಶತ್ರುಗಳು ಹಿಂದೆ ಸರಿಯುವರು. ವೃತ್ತಿ ವ್ಯವಹಾರದಲ್ಲಿ ಲಾಭ. ಸರಕಾರಿ ಕೆಲಸ ಶೀಘ್ರ ಆಗುವುದು. ತಂದೆ ತಾಯಿಯವರ ಆರೋಗ್ಯದಲ್ಲಿ ಸುಧಾರಣೆ. ಶುಭದಿನ 13. ಚಂಡಿ ಪಾರಾಯಣ ಮಾಡಿರಿ.




ವಾರದ ಪ್ರಾರಂಭದಲ್ಲಿ ನವೋಲ್ಲಾಸ ಬರುವುದು. ಧರ್ಮ, ದಾನಕ್ಕಾಗಿ ಖರ್ಚು. ಮಿತ್ರರಿಗೆ ಸಹಾಯ. ವ್ಯಾಪಾರದಲ್ಲಿ ಅಧಿಕ ಲಾಭ, ಹಳೆಯ ಮಿತ್ರರ ಆಗಮನ. ಹಲವು ದಿನಗಳ ಸಮಸ್ಯೆ ಬಗೆಹರಿಯುವುದು. ಮನೆಯಲ್ಲಿ ಸಂಭ್ರಮ. ಮಕ್ಕಳಿಂದ ಶುಭವಾರ್ತೆ. ಮಹತ್ವದ ಕಾಗದ ಪತ್ರಗಳ ರಕ್ಷಣೆ. ಸಹೋದರರ ಸಹಾಯ. ಆರೋಗ್ಯದಲ್ಲಿ ವ್ಯತ್ಯಯ ಉಂಟಾಗಬಹುದು. ಶುಭದಿನ 15. ಶಿವ ಕವಚ ಓದಿರಿ.




ಕುಟುಂಬ ಸದಸ್ಯರ ಜೊತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಇದೇ ವೇಳೆ ಕುಟುಂಬದ ಸದಸ್ಯರಿಗೆ ಕೆಲವು ಕೆಲಸಗಳನ್ನು ವಹಿಸುತ್ತೀರಿ. ಅವುಗಳನ್ನು ತುಂಬ ಶ್ರದ್ಧೆಯಿಂದ ಅವರು ಮಾಡಿ ಮುಗಿಸುತ್ತಾರೆ. ಈ ಹಿಂದೆಂದಿಗಿಂತಲೂ ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಶುಭದಿನ 16. ಸೌಂದರ್ಯಲಹರಿ ಪಠಿಸಿರಿ.




ನಿಮ್ಮ ತಾಂತ್ರಿಕ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಕೆಲವರ ಪರಿಚಯ ಆಗುತ್ತದೆ. ನಿಮ್ಮಲ್ಲಿ ಸಕಾರಾತ್ಮಕ ಬದಲಾವಣೆ ಅನುಭವಕ್ಕೆ ಬರುತ್ತದೆ. ಕುಟುಂಬದೊಳಗೆ ಸಂತಸದ ವಾತಾವರಣ ಇರುತ್ತದೆ. ಹಣದ ಮೂಲವನ್ನು ಸರಿಯಾದ ದಾರಿಯಲ್ಲಿ ವಿತರಿಸಲು ಯಶಸ್ಸು ಸಾಧಿಸುತ್ತೀರಿ. ವಾರದ ಅಂತ್ಯಕ್ಕೆ ಸರಿಯುತ್ತಾ ಕೌಟುಂಬಿಕ ಜೀವನ ಸಂತುಷ್ಟವಾಗಿ ಇರುತ್ತದೆ. ಶುಭದಿನ 15. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ಈ ವಾರ ವೈಯಕ್ತಿಕ ಹಾಗೂ ವೃತ್ತಿಪರ ಬದುಕಿನಲ್ಲಿ ಲಾಭ ಹಾಗೂ ಮಹತ್ತರವಾದ ಪ್ರಗತಿ ಕಾಣುವ ಯೋಗ ಇದೆ. ಸೇವಾ ವಲಯದಲ್ಲಿ ಕಾರ್ಯ ನಿರ್ವಹಿಸುವವರಿಗೆ ಪ್ರತಿಭೆಯನ್ನು ಪ್ರದರ್ಶಿಸಲು ಅವಕಾಶಗಳಿವೆ. ವಾರದ ಮಧ್ಯ ಭಾಗದಲ್ಲಿ ಪ್ರಗತಿ ಮತ್ತಷ್ಟು ವೇಗ ಪಡೆದುಕೊಳ್ಳುತ್ತದೆ. ಶೈಕ್ಷಣಿಕ ಅರ್ಹತೆ ಹೆಚ್ಚಿಸಿಕೊಳ್ಳಲು ಪ್ರಯತ್ನಿಸುತ್ತೀರಿ. ಶುಭದಿನ 14. ದೇವ್ಯಪರಾಧ ಕ್ಷಮಾಪನಾ ಸ್ತೋತ್ರ ಪಠಿಸಿರಿ.




ಬಹಳ ಮುಖ್ಯವಾದ ಪಟ್ಟಿಯೊಂದನ್ನು ಸಿದ್ಧ ಮಾಡಿಕೊಳ್ಳುವುದಕ್ಕೆ ವಾರದ ಶುರುವಿನಲ್ಲಿ ಸಿದ್ಧರಾಗುತ್ತೀರಿ. ಕೆಲ ವಿಚಾರಗಳು ಕಣ್ತಪ್ಪಿನಿಂದ ಬಿಟ್ಟು ಹೋಗುವ ಸಾಧ್ಯತೆ ಇದೆ. ವಾರದ ಮಧ್ಯ ಭಾಗದಲ್ಲಿ ವ್ಯಾಪಾರ ವ್ಯವಹಾರಗಳ ವಿಸ್ತರಣೆಗೆ ಶ್ರಮ ಹಾಕುತ್ತೀರಿ. ನಿಮ್ಮ ಕೆಲಸದಲ್ಲಿ ಸಕಾರಾತ್ಮಕ ಬದಲಾವಣೆಯನ್ನು ತಂದುಕೊಳ್ಳುತ್ತೀರಿ. ಶುಭದಿನ 13. ಶ್ರೀ ದುರ್ಗಾಪಾರಾಯಣ ಮಾಡಿರಿ.




ಆಸ್ತಿ ಖರೀದಿಗೆ ಪ್ರಯತ್ನಿಸುತ್ತಿರುವವರು ಸಂಬಂಧಪಟ್ಟ ಕಾಗದಪತ್ರಗಳನ್ನು ಕೂಲಂಕಷವಾಗಿ ಪರಿಶೀಲನೆ ನಡೆಸಲಿದ್ದೀರಿ. ದೊಡ್ಡ ಪ್ರಮಾದಗಳನ್ನು ತಡೆಯುವ ಸನ್ನಿವೇಶಗಳು ನಿಮಗೆ ಪೂರಕ ಆಗಲಿವೆ. ವೈಯಕ್ತಿಕ ಸಂಬಂಧದಲ್ಲಿ ಕೆಲವು ಕಹಿ ಬೆಳವಣಿಗೆಗಳು ಆಗಲಿವೆ. ವಾರದ ಅಂತ್ಯಕ್ಕೆ ಸರಿಯುತ್ತಾ ಕುಟುಂಬದವರ ಬೆಂಬಲ ದೊರೆಯಲಿದೆ. ಶುಭದಿನ 16. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ವಾರದ ಶುರುವಿನಲ್ಲೇ ವ್ಯಾಪಾರ ಉದ್ಯಮದಲ್ಲಿ ಪ್ರಗತಿ ಕಾಣಿಸುತ್ತದೆ. ಪ್ರತಿಷ್ಠಿತ ಸಂಸ್ಥೆಯೊಂದರ ಜೊತೆಗೆ ಮಹತ್ವದ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆಗಳಿವೆ. ಎಷ್ಟೇ ಒತ್ತಡದ ಕೆಲಸ ಇದ್ದರೂ ಆರಾಮವಾಗಿ ಪೂರೈಸಲು ನಿಮ್ಮಿಂದ ಸಾಧ್ಯವಾಗಲಿದೆ. ವೈವಾಹಿಕ ಜೀವನ ಸಂತೋಷದಿಂದ ಇರುತ್ತದೆ. ತಾಂತ್ರಿಕ ಜ್ಞಾನ ಹೆಚ್ಚಿಸಿಕೊಳ್ಳುವ ಅವಕಾಶ ದೊರೆಯುತ್ತದೆ. ಶುಭದಿನ 12. ಕಾಲಭೈರವನ ಸೇವೆ ಮಾಡಿರಿ.




ನಿಮ್ಮ ಬಳಿ ಇರುವ ಹಣದ ಸದುಪಯೋಗ ಮಾಡಿಕೊಳ್ಳುವ ಬಗ್ಗೆ ಯೋಜನೆ ರೂಪಿಸಲಿದ್ದೀರಿ. ಶ್ರಮಕ್ಕೆ ನಿರೀಕ್ಷಿತ ಫಲಿತಾಂಶ ಕೂಡ ದೊರೆಯಲಿದೆ. ನೀವು ಹಾಕಿಕೊಂಡ ಗುರಿಯನ್ನು ಅಂದುಕೊಂಡ ಸಮಯಕ್ಕಿಂತ ಮುಂಚಿತವಾಗಿಯೇ ತಲುಪುವ ಎಲ್ಲ ಸಾಧ್ಯತೆಗಳಿವೆ. ಪ್ರೀತಿ ಪ್ರೇಮದಲ್ಲಿ ಇರುವವರು ಸಂಗಾತಿಯ ಭಾವನೆಗಳಿಗೆ ಗೌರವ ನೀಡುತ್ತೀರಿ. ಶುಭದಿನ 15. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಾರದ ಆರಂಭದಲ್ಲಿ ಉನ್ನತ ಶಿಕ್ಷಣಕ್ಕೆ ಯತ್ನಿಸುತ್ತಿರುವವರಿಗೆ ಯಶಸ್ಸು. ದೇವತಾ ಆರಾಧನೆಗೆ ಶ್ರಮ ಹಾಕುತ್ತೀರಿ. ಉದ್ಯೋಗ ಸ್ಥಳದಲ್ಲಿ ಭಾವನಾತ್ಮಕವಾಗಿ ಕೆಲವು ನಿರ್ಧಾರಗಳನ್ನು ತೆಗೆದುಕೊಳ್ಳಲಿದ್ದೀರಿ. ವೃತ್ತಿಪರ ಜೀವನದಲ್ಲಿ ಅತ್ಯುತ್ತಮವಾದ ಬೆಳವಣಿಗೆ ಇದೆ. ಈ ವಾರ ಆದಾಯ ಅನುಕೂಲಕರವಾಗಿ ಇರಲಿದೆ. ಶುಭದಿನ 17. ಕನಕಧಾರಾ ಸ್ತೋತ್ರ ಪಠಣ ಮಾಡಿರಿ.